## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2107 |
| 2. ಸದಸ್ಯರ ಹೆಸರು | : | ಶ್ರೀ ಪಿ.ಆರ್. ರಮೇಶ್ |
| 3. ಉತ್ತರಿಸುವ ದಿನಾಂಕ | : | (ಒಳಾಡಳಿತ ಇಲಾಖೆಯಿಂದ ವರ್ಗಾವಣೆಗೊಂಡಿರುವ ಪ್ರಶ್ನೆ) 17-03-2022 |
| 4. ಉತ್ತರಿಸುವವರು | : | ಮಾನ್ಯ ಮುಖ್ಯಮಂತ್ರಿಯವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಮಂಜೂರಾದ ಭೂ ಸರ್ವೆ ಅಧಿಕಾರಿಗಳ/ನೌಕರರ ಹುದ್ದೆಗಳೆಷ್ಟು; (ಸಂಪೂರ್ಣ ವಿವರ ನೀಡುವುದು) | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವೃಂದ ಮತ್ತು ನೇಮಕಾತಿ ನಿಯಮಾವಳಿಗಳನ್ವಯ 05 ಭೂಮಾಪಕರ ಹುದ್ದೆಗಳು ಮಂಜೂರಾಗಿದ್ದು, ನಿಯೋಜನೆ ಮೇಲೆ ಭರ್ತಿ ಮಾಡಲು ಅವಕಾಶವಿರುತ್ತದೆ. ಪ್ರಸ್ತುತ, 04 ಭೂಮಾಪಕರು ಮತ್ತು 01 ತಪಾಸಕರು ಉಪ ಆಯುಕ್ತರು (ಭೂಸ್ವಾಧೀನ) ಮತ್ತು ಸಹಾಯಕ ಆಯುಕ್ತರು (ಆಸ್ತಿಗಳು) ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುತ್ತಾರೆ.<br><br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೆಲಸ ಕಾರ್ಯಗಳ ಹಿತದೃಷ್ಟಿಯಿಂದ ಹೆಚ್ಚುವರಿಯಾಗಿ 15 ಭೂಮಾಪಕರ ಹುದ್ದೆಗಳನ್ನು ಹಾಗೂ 02 ತಪಾಸಕರ ಹುದ್ದೆಗಳನ್ನು ಸೃಜಿಸಲು ಪಾಲಿಕೆಯ ಮುಖ್ಯ ಆಯುಕ್ತರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ. |
| ಆ | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಮಂಜೂರಾದ ಭೂ ಸರ್ವೆ ಅಧಿಕಾರಿಗಳ/ನೌಕರರ ಹುದ್ದೆಗಳ ಪೈಕಿ ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು; ಈ ಕುರಿತು ಸರ್ಕಾರದ ಕೈಗೊಂಡ ಕ್ರಮಗಳೇನು? (ಸಂಪೂರ್ಣಗಳ ವಿವರ ನೀಡುವುದು) | |

ಸಂಖ್ಯೆ: ನಅಇ 46 ಬಿಬಿಎಸ್ 2022(ಇ)

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ.